ಆರ್ಥಿಕ ಸಚಿವಾಲಯ

ಸಂಖ್ಯೆ: ಆಇ 1 ಸೇನಿಸೇ 2011,ಬೆಂಗಳೂರು, ದಿನಾಂಕ:19.8.2011.

## ತಿದ್ದುಪಡಿ

ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011 ದಿನಾಂಕ:29.06.2011ರ ಆದೇಶ ಭಾಗದಲ್ಲಿನ ಷರತ್ತು (vii) ರ ಬದಲಾಗಿ ಈ ಕೆಳಕಂಡಂತೆ ಪ್ರತಿಸ್ಥಾಪಿಸಲಾಗಿದೆ:-

**vii).** ಯಾವ ಪ್ರಕರಣದಲ್ಲಿ ಮಕ್ಕಳು ಗುಣಮುಖವಾಗದ ಮತ್ತು ಶಾಶ್ವತವಾಗಿ ಅಂಗವಿಕಲ/ಬುದ್ಧಿಮಾಂದ್ಯದಿಂದ ಬಳಲುತ್ತಿದ್ದಾರೆ ಮತ್ತು **reassement is not required** ಎಂದು ವೈದ್ಯಕೀಯ ಮಂಡಳಿಯು ಪ್ರಮಾಣಿಕರಿಸಿದೆಯೋ ಅಂತಹ ಪ್ರಕರಣಗಳಲ್ಲಿ ಮಹಿಳಾ ಸರ್ಕಾರಿ ನೌಕರರು, ವೈದ್ಯಕೀಯ ಮಂಡಳಿ ನೀಡುವ ವೈದ್ಯಕೀಯ ಮೂಲ ಪ್ರಮಾಣ ಪತ್ರವನ್ನು ಐದು ವರ್ಷಕ್ಕೆ ಒಮ್ಮೆ ಸಲ್ಲಿಸಿ, ಆ ಐದು ವರ್ಷದ ಅವಧಿಯಲ್ಲಿ ಕಂಡಿಕೆ v ರನ್ವಯ ಒಂದು ವರ್ಷಕ್ಕೆ ಮೂರು ಬಾರಿ ರಜೆ ಮಂಜೂರು ಮಾಡಿಸಿಕೊಳ್ಳಬಹುದಾಗಿದೆ. ಯಾವ ಪ್ರಕರಣದಲ್ಲಿ ಅಂಗವಿಕಲ/ಬುದ್ಧಿಮಾಂದ್ಯತೆಯಿಂದ ಗುಣಮುಖವಾಗುವ ಸಾಧ್ಯತೆಯಿದೆ ಮತ್ತು **reassement is required** ಎಂದು ವೈದ್ಯಕೀಯ ಮಂಡಳಿಯು ಪ್ರಮಾಣಿಕರಿಸಿದೆಯೋ ಅಂತಹ ಪ್ರಕರಣಗಳಲ್ಲಿ ವೈದ್ಯಕೀಯ ಮಂಡಳಿ ನೀಡುವ ವೈದ್ಯಕೀಯ ಮೂಲ ಪ್ರಮಾಣ ಪತ್ರವನ್ನು ವರ್ಷಕ್ಕೆ ಒಂದು ಬಾರಿ ಸಲ್ಲಿಸಿ, ಆ ಒಂದು ವರ್ಷದ ಅವಧಿಯಲ್ಲಿ ಕಂಡಿಕೆ v ರನ್ವಯ ಮೂರು ಬಾರಿ ರಜೆ ಮಂಜೂರು ಮಾಡಿಸಿಕೊಳ್ಳಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Alice Gonsalves 19/8/2011
(ಆಲಿಸ್ ಗೊನ್ಸಾಲ್ವಿಸ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ಆರ್ಥಿಕಇಲಾಖೆ(ಸೇವೆಗಳು-1)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1.ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳಿಗೆ.
2.ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು/ವಿಶೇಷ ಕಾರ್ಯದರ್ಶಿಗಳು

ಅಪರ ಕಾರ್ಯದರ್ಶಿಗಳು/ಜಂಟಿ ಕಾರ್ಯದರ್ಶಿಗಳು/ಉಪ ಕಾರ್ಯದರ್ಶಿಗಳಿಗೆ ಹಾಗೂ ಅಧೀನ ಕಾರ್ಯದರ್ಶಿಗಳಿಗೆ.

3.ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

4 ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

5 ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.

6 ಮಹಾಲೇಖಪಾಲರು (ಲೆಕ್ಕಪತ್ರ:ಲೆಕ್ಕ ಪರಿಶೋಧನೆ: ಜಿ.ಎಂ.ಶಾಖೆ),ಕರ್ನಾಟಕ, ಬೆಂಗಳೂರು.

7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.

8. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.

9. ರಿಜಿಸ್ಟ್ರಾರ್, ಕರ್ನಾಟಕ ಲೋಕಯುಕ್ತ, ಬೆಂಗಳೂರು.

10.ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.

11.ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.

12.ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು.

13.ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ , ವಿಕಾಸ ಸೌಧ, ಬೆಂಗಳೂರು (10 ಪ್ರತಿಗಳೊಂದಿಗೆ)

14.ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

15.ಅಧ್ಯಕ್ಷರು,ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು

16.ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.

17.ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ; ವಿಧಾನ ಮಂಡಲ ಗ್ರಂಥಾಲಯ

18.ವಾರಪತ್ರ.

[ಕ್ರಮ ಸಂಖ್ಯೆ: 6 ರಿಂದ 13 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.

GBH19082011